# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 692 (970) |
| ಸದಸ್ಯರ ಹೆಸರು | : | ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 27.12.2022 |
| ಉತ್ತರಿಸಬೇಕಾದವರು | : | ನಗರಾಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ನಗರಾಭಿವೃದ್ಧಿ ಇಲಾಖೆಯಿಂದ ಹೊರ ವರ್ತುಲ ರಸ್ತೆಯನ್ನು ನಿರ್ಮಾಣ ಮಾಡುವ ಉದ್ದೇಶವೇನು; (ಸಂಪೂರ್ಣವಾದ ಮಾಹಿತಿಯನ್ನು ನೀಡುವುದು). | ನಗರ ಪ್ರದೇಶಗಳಲ್ಲಿ ವಾಹನ ದಟ್ಟಣೆ ಕಡಿಮೆ ಮಾಡಲು ಮಾಲೂರು ರಸ್ತೆಯಿಂದ-ಬೆಂಗಳೂರು ರಾಷ್ಟ್ರೀಯ ಹೆದ್ದಾರಿ, ಅಂತರಗಂಗೆ ರಸ್ತೆಯಿಂದ-ಖಾದ್ರಿಪುರ ರಸ್ತೆ, ಚಿಕ್ಕಬಳ್ಳಾಪುರ ರಾಜ್ಯ ಹೆದ್ದಾರಿ ಹಾಗೂ ಚಿಂತಾಮಣಿ ರಾಜ್ಯ ಹೆದ್ದಾರಿಗೆ, ಶ್ರೀನಿವಾಸಪುರ ರಾಜ್ಯ ಹೆದ್ದಾರಿಗೆ ಸಂಪರ್ಕ ಕಲ್ಪಿಸುವ ಉದ್ದೇಶದಿಂದ ಹೊರ ವರ್ತುಲ ರಸ್ತೆಯ ಪ್ರಸ್ತಾಪ ಮಾಡಲಾಗಿರುತ್ತದೆ. |
| ಆ) | ಕೋಲಾರ ನಗರದಲ್ಲಿ ಹೊರ ವರ್ತುಲ ರಸ್ತೆಯ ಯೋಜನೆಯನ್ನು ಯಾವಾಗ ರೂಪಿಸಲಾಯಿತು; ಸದರಿ ಯೋಜನೆಯ ಪ್ರಸ್ತಾವನೆಯ ಅಂದಾಜು ಪಟ್ಟಿಯ ಸಂಪೂರ್ಣವಾದ ಮಾಹಿತಿ ನೀಡುವುದು; | ಕೋಲಾರ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಸ್ಥಳೀಯ ಯೋಜನಾ ಪ್ರದೇಶಕ್ಕೆ ದಿನಾಂಕ:09.08.2010 ರಂದು ಮಹಾಯೋಜನೆ ಅನುಮೋದನೆಯಾಗಿದ್ದು, ಸದರಿ ಅನುಮೋದಿತ ಮಹಾಯೋಜನೆಯಲ್ಲಿ ಹೊರ ವರ್ತುಲ ರಸ್ತೆಯನ್ನು ಪ್ರಸ್ತಾಪಿಸಲಾಗಿದೆ. ಸದರಿ ಹೊರ ವರ್ತುಲ ರಸ್ತೆಯನ್ನು ಅಭಿವೃದ್ಧಿಪಡಿಸಲು ಒಟ್ಟು ಮೌಲ್ಯ ರೂ. 80,37,86,112/-ಗಳನ್ನು ಅಂದಾಜಿಲಾಗಿದೆ. |

| | | |
|---|---|---|
| ಇ) | ಇತ್ತೀಚಿನ ದಿನಗಳಲ್ಲಿ ಕೋಲಾರ ಜಿಲ್ಲೆಯಲ್ಲಿ ಹೊಸ ಕೈಗಾರಿಕೆಗಳು ಹೆಚ್ಚಾಗಿದ್ದು, ಹೊರ ವರ್ತುಲ ರಸ್ತೆ ನಿರ್ಮಾಣ ಅಗತ್ಯವಾಗಿದ್ದು, ಕೋಲಾರ ನಗರದಲ್ಲಿ ಹೊರ ವರ್ತುಲ ರಸ್ತೆ ನಿರ್ಮಾಣಕ್ಕೆ ಸರ್ಕಾರದಿಂದ ಯಾವುದಾದರೂ ಹೊಸ ಯೋಜನೆಯನ್ನು ರೂಪಿಸಲಾಗಿದೆಯೇ; ರೂಪಿಸಿದ್ದಲ್ಲಿ ಮಾಹಿತಿ ನೀಡುವುದು; ರೂಪಿಸದೇ ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಯೋಜನೆಯನ್ನು ರೂಪಿಸಲಾಗುವುದು (ವಿಸ್ತೃತವಾದ ಮಾಹಿತಿ ನೀಡುವುದು). | ಕೋಲಾರ ಜಿಲ್ಲೆಯಲ್ಲಿ ಹೊರವರ್ತುಲ ರಸ್ತೆಯ ಹೊಸ ಯೋಜನೆಯನ್ನು ರೂಪಿಸಲಾಗಿರುವುದಿಲ್ಲ. ಆದರೆ, ಪ್ರಸ್ತಾಪಿತ ಹೊರ ವರ್ತುಲ ರಸ್ತೆಯು 2010 ನೇ ಸಾಲಿನ ಮಹಾಯೋಜನೆಯಲ್ಲಿ ಅಳವಡಿಸಲಾಗಿರುವುದರಿಂದ ನಗರದ ಬೆಳವಣಿಗೆ ಮತ್ತು ಅಭಿವೃದ್ಧಿಯಿಂದ ಪ್ರಸ್ತಾಪಿತ / ಉದ್ದೇಶಿತ ಹೊರ ವರ್ತುಲ ರಸ್ತೆಯು ನಗರದ ಮಧ್ಯೆ ಹಾದು ಹೋಗುವುದರಿಂದ ಉದ್ದೇಶಿತ ಕಾಮಗಾರಿ / ಯೋಜನೆಯನ್ನು ಕೈಗೆತ್ತಿಕೊಳ್ಳಲು ಸಾಧ್ಯವಾಗಿರುವುದಿಲ್ಲ. ಆದುದರಿಂದ, ಮುಂಬರುವ ಮಹಾಯೋಜನೆ ಪರಿಷ್ಕರಣೆಯಲ್ಲಿ ಹೊರವರ್ತುಲ ರಸ್ತೆಯ ಹೊಸ ಪ್ರಸ್ತಾವನೆಯನ್ನು ಪರಿಷ್ಕರಿಸಿ ಮಹಾಯೋಜನೆಯಲ್ಲಿ ಅಳವಡಿಸಿದ ನಂತರ ಅನುಮೋದನೆ ನೀಡಿ ಅಭಿವೃದ್ಧಿಪಡಿಸಲಾಗುವುದು. |

**ಸಂಖ್ಯೆ: ನಅಇ 62 ಎಲ್‌ಸಿಕ್ಯೂ 2022(ಇ-ಕಡತ)**

**(ಬಿ.ಎ. ಬಸವರಾಜು)**
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು